# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 473 (558) |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.12.2025 |
| ಉತ್ತರಿಸುವ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಮೈಸೂರು (KSTRI MYSORE) ಇದರ ಮೂಲಕ ಇಲ್ಲಿಯವರೆಗೆ 16 ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನ ವರದಿಗಳನ್ನು ಸರಕಾರಕ್ಕೆ ಸಲ್ಲಿಸಿ ಸುಮಾರು ಗರಿಷ್ಟ 10 ವರ್ಷ ಹಾಗೂ ಕನಿಷ್ಟ 02 ವರ್ಷಗಳು ಆಗಿದ್ದು ಈ ಕುರಿತು ಯಾವಾಗ ಅಗತ್ಯ ಕ್ರಮ ವಹಿಸಲಾಗುವುದು: ಈ ವಿಳಂಬಕ್ಕೆ ಕಾರಣಗಳೇನು;</td><td>ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ವತಿಯಿಂದ ಕೈಗೊಳ್ಳಲಾದ ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನದ ಅಂತಿಮ ವರದಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳಲಾಗುವುದು.</td></tr>
<tr><td>ಆ)</td><td>ಕೇಂದ್ರ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಬಗ್ಗೆ ಕುಡಬಿ ಸಮುದಾಯದ ಕುರಿತಂತೆ 2020ರಲ್ಲಿ ಪ್ರೋ.ಮನೋಹರ ಯಾದವ್ (ಐಸೆಕ್ ಬೆಂಗಳೂರು) ಕುಲಶಾಸ್ತ್ರೀಯ ಅಧ್ಯಯನ ನಡೆಸಿ ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿ ಶಿಫಾರಸ್ಸು ಮಾಡಿದೆಯೇ;</td><td>ಹೌದು</td></tr>
<tr><td>ಇ)</td><td>ಪ್ರೋ. ಮನೋಹರ್ ಯಾದವ್ ಕುಡುಬಿ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ವರದಿಯಲ್ಲಿ ಸದರಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವಂತೆ ಶಿಫಾರಸ್ಸು ಮಾಡಿದ್ದರೂ ಕಳೆದ 04 ವರ್ಷದಿಂದ ಇಲಾಖೆ ಸಕಾರಾತ್ಮಕ ಕ್ರಮ ವಹಿಸದಿರಲು ಕಾರಣವೇನು;</td><td rowspan="2">ಸರ್ಕಾರದ ಆದೇಶ ಸಂಖ್ಯೆ:ಸಕಇ 113 ಎಸ್ಎಡಿ 2007 ದಿನಾಂಕ:23.04.2015ರ ಆದೇಶದಂತೆ ಕರ್ನಾಟಕದಲ್ಲಿನ ಕುಡುಬಿ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನವನ್ನು ನಿರ್ದೇಶಕರು, ಇನ್ಸ್ಟಿಟ್ಯೂಟ್ ಫಾರ್ ಸೋಷಿಯಲ್ ಅಂಡ್ ಎಕನಾಮಿಕಲ್ ಚೇಂಜ್, ನಾಗರಬಾವಿ, ಬೆಂಗಳೂರು ಇವರು ಕೈಗೊಂಡ ಕುಲಶಾಸ್ತ್ರೀಯ ಅಧ್ಯಯನದ ಅಂತಿಮ ವರದಿಯನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರುರವರ ಪತ್ರ ದಿನಾಂಕ:25.01.2021ರಂದು ಸಲ್ಲಿಸಲಾಗಿದ್ದು, ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಭಿಪ್ರಾಯವನ್ನು ಪಡೆದು ಪರಿಶೀಲಿಸಲಾಗುತ್ತಿದೆ.</td></tr>
<tr><td>ಈ)</td><td>ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಯಾವ ಕಾಲಮಿತಿಯೊಳಗೆ ಸಲ್ಲಿಸಲಾಗುವುದು?</td></tr>
</table>

STW/SECB/SAD/134/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ